# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 18, ರಾಧಾಕೃಷ್ಣ ದೇವಸ್ಥಾನ.

**ಸಂಖ್ಯೆ: ಸ.ಅ/ವಾ-18/ಪಿ.ಆರ್/04/2021-22** **ದಿನಾಂಕ:-24-09-2021**

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 18-09-2021 ರಂದು ವಾರ್ಡ್ ನಂ: 18, ರಾಧಾಕೃಷ್ಣ ದೇವಸ್ಥಾನದ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

**:: ಸಭೆಗೆ ಹಾಜರಾಗಿದ್ದವರ ವಿವರಗಳು ::**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ಎಸ್.ಬಸವರಾಜು. ಭಾ.ಆ.ಸೇ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಈ.ಈರಣ್ಣ. | ಸದಸ್ಯ ಕಾರ್ಯದರ್ಶಿ ವಾಡ್ ನಂ: 18 |
| 3. | ಶ್ರೀ. ನಿರಂಜನಮೂರ್ತಿ | ಸಹಾಯಕ ಕಂದಾಯ ಅಧಿಕಾರಿ (ಹೆಬ್ಬಾಳ) |
| 4. | ಶ್ರೀ.ಅಕ್ಷಯ್ | ಕಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್ ನಂ.18) |
| 5. | ಶ್ರೀ ಸ್ವಾಮಿ | ವಿದ್ಯುತ್ ಗುತ್ತಿಗೆದಾರರ ಪ್ರತಿನಿಧಿ |
| 6. | ಶ್ರೀ ರಾಜಶೇಖರ್ | ಕಿರಿಯ ಅಭಿಯಂತರರು (ಬೆಸ್ಕಾಂ) |
| 7. | ಶ್ರೀಮತಿ ಸಾಕೀರ್ ಉನ್ನೀಸಾ | ಜಲಮಾಪಕ ಓದುಗಾರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 8. | ಶ್ರೀಮತಿ ಮಮತ. | ಹಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್ ನಂ.18) |
| 9. | ಶ್ರೀ. ವಿಜ್ಞಾನಗೌಡ. | ಕ್ಷೇಮಾಭಿವೃದ್ಧಿ ಸಂಘಗಳ ಸಂಯೋಜಕರು |

ಪ್ರಾರಂಭಿಕವಾಗಿ ಸಭೆಯನ್ನು ಉದ್ದೇಶಿಸಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್‌ನಲ್ಲಿರುವ ನಿವಾಸಿಗಳ ಕ್ಷೇಮಾಬಿವೃದ್ಧಿ ಸಂಘದವರನ್ನು ಹಾಗೂ ಅಧಿಕಾರಿಗಳನ್ನು ಸ್ವಾಗತಿಸಿದರು.

ಸಭೆಯ ಅಧ್ಯಕ್ಷರು, ಅಧಿಕಾರಿ ನೌಕರುಗಳು ಮತ್ತು ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಸೇರಿ ಸ್ವ-ಪರಿಚಯ ಮಾಡಿಕೊಳ್ಳಲಾಯಿತು.

ವಾರ್ಡಿನ ಅಧ್ಯಕ್ಷರು ಮಾತನಾಡುತ್ತಾ ವಾರ್ಡಿನಲ್ಲಿ ಅಭಿವೃದ್ಧಿಯಾಗಬೇಕಾಗಿರುವ ಹಾಗೂ ಕುಂದು ಕೊರತೆಗಳ ಬಗ್ಗೆ ಚರ್ಚಿಸಲಾಯಿತು.

1. ವಾರ್ಡ್‌ನ ಅಧ್ಯಕ್ಷರು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರ ದೂರಿನ ಮೇರೆಗೆ ಬೀದಿ ದೀಪಗಳ ಕಂಬಗಳಿಗೆ 15 ದಿನಗಳ ಒಳಗಾಗಿ ಹೊಸ ಸ್ವಿಚ್‌ಗಳನ್ನು ಅಳವಡಿಸಲು ವಿದ್ಯುತ್ ಗುತ್ತಿಗೆದಾರರ ಪ್ರತಿನಿಧಿಯಾದ ಶ್ರೀ ಸ್ವಾಮಿ ರವರಿಗೆ ಸೂಚಿಸಿದರು.
2. ಜೋತು ಬಿದ್ದಿರುವ ಬೀದಿ ದೀಪಗಳ ವೈರ್‌ಗಳನ್ನು ಸರಿಪಡಿಸಲು ವಿದ್ಯುತ್ ಗುತ್ತಿಗೆದಾರರ ಪ್ರತಿನಿಧಿಯಾದ ಶ್ರೀ ಸ್ವಾಮಿ ರವರಿಗೆ ವಾರ್ಡ್‌ನ ಅಧ್ಯಕ್ಷರು ಸೂಚಿಸಿದರು.
3. ವಿದ್ಯುತ್ ದೀಪಗಳ ಸುತ್ತಲೂ ಬೆಳೆದಿರುವ ಮರದ ಕೊಂಬೆಗಳನ್ನು ಟ್ರಿಮ್ಮಿಂಗ್ ಮಾಡಲು ವಿದ್ಯುತ್ ಗುತ್ತಿಗೆದಾರರ ಪ್ರತಿನಿಧಿಯಾದ ಶ್ರೀ ಸ್ವಾಮಿ ರವರಿಗೆ ವಾರ್ಡ್‌ನ ಅಧ್ಯಕ್ಷರು ಸೂಚಿಸಿದರು.
4. ವಾರ್ಡ್‌ನಲ್ಲಿ ಕೈಗೊಂಡಿರುವ 11 ಕೆ.ವಿ ಕಾಮಗಾರಿಯಿಂದ ಹದಗೆಟ್ಟಿರುವ ರಸ್ತೆಯನ್ನು ಸರಿಪಡಿಸಿ ಸ್ಥಳದಲ್ಲಿ ಶೇಖರಣೆಯಾಗಿರುವ ಡೆಬ್ರಿಸ್ ಅನ್ನು ತಿಂಗಳಾಂತ್ಯದಲ್ಲಿ ತೆರವುಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ವಾರ್ಡ್‌ನ ಅಧ್ಯಕ್ಷರು ಸೂಚಿಸಲಾಯಿತು.

5. ವಾರ್ಡ್‌ನಲ್ಲಿ ಕಸ ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸಲು ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 18 ರಾದಾಕೃಷ್ಣ ದೇವಸ್ಥಾನ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 18, ರಾದಾಕೃಷ್ಣ ದೇವಸ್ಥಾನ